**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹೆಚ್.ಪಿ.ಸುಧಾಮ್ ದಾಸ್ ಇವರು ನಿಯಮ-72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ - "ಕನಕಪುರ ತಾಲ್ಲೂಕು, ಕೋಡಿಹಳ್ಳಿ ಪೋಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ವರ್ಷದ ಫೆಬ್ರವರಿ ತಿಂಗಳಿಂದೀಚೆಗೆ ಕಾಡಾನೆ ದಾಳಿಯಿಂದ 04 ಮಂದಿ ರೈತರು ಮೃತಪಟ್ಟಿದ್ದು, ಅದರಲ್ಲಿ ಕಳೆದ ವಾರ ಒಂದರಲ್ಲೇ ಇಬ್ಬರು ರೈತರು ದಾರುಣ ಸಾವೀಗೀಡಾಗಿ ಆ ಪ್ರದೇಶದ ವ್ಯಾಪ್ತಿಯಲ್ಲೆಲ್ಲಾ ಭೀತಿ ವಾತಾವರಣ ನಿರ್ಮಾಣವಾಗಿರುತ್ತದೆ. ಸದರಿ ಕಾಡಾನೆ ಹಾವಳಿ ತಡೆಯಲು ಸಾಕಷ್ಟು ಸಿಬ್ಬಂದಿ ಹಾಗೂ ಸಲಕರಣೆ ಇಲ್ಲದ ಕಾರಣ, ಅರಣ್ಯ ಹಾಗೂ ಪೋಲೀಸ್ ಇಲಾಖೆ ವಿಫಲವಾಗಿದ್ದು, ರೈತಾಪಿ ವರ್ಗದ ಜನರು ತಮ್ಮ ಜೀವ ಹಾಗೂ ಬೆಳೆಗಳಿಗೆ ರಕ್ಷಣೆ ಇಲ್ಲದೆ ಸದಾಕಾಲ ಪರಿತಪಿಸುವಂತಾಗಿದೆ. ಸದರಿ ಕಾಡಾನೆ ಹಾವಳಿ ತಡೆಯಲು ಅರಣ್ಯ ಇಲಾಖೆಯು ಅಳವಡಿಸುವ ರೈಲ್ವೆ ಹಳಿ ತಡೆಗೋಡೆ ಸಧ್ಯದ ಪರಿಸ್ಥಿತಿಯಲ್ಲಿ ವಿಶ್ವಾಸಾರ್ಹ ಪರಿಹಾರವಾಗಿ ಕಂಡುಬಂದಿದ್ದರೂ ಸಹ ಸದರಿ ತಡೆಗೋಡೆಯನ್ನು ಕೇವಲ ಕೆಲಭಾಗಕ್ಕೆ ಮಾತ್ರ ಸೀಮಿತಗೊಳಿಸಿ ಹಣಕಾಸಿನ ಕೊರತೆಯ ಕಾರಣ, ನೀಡಿ ಇನ್ನುಳಿದ ಭಾಗವನ್ನು ಯಾವುದೇ ರಕ್ಷಣೆ ಇಲ್ಲದೆ ಬಿಟ್ಟಿರುವ ಕಾರಣ ಪ್ರತಿಯೊಂದು ದುರ್ಘಟನೆ ನಡೆದ ಸಂದರ್ಭದಲ್ಲಿ ಈ ಪ್ರದೇಶದ ಜನರು ಸರ್ಕಾರವು ತಮಗೆ ರಕ್ಷಣೆಯು ಒದಗಿಸುವದರಲ್ಲಿ ವಿಫಲವಾಗಿರುವುದಕ್ಕೆ ಅರಣ್ಯ ಮತ್ತು ಪೋಲೀಸ್ ಇಲಾಖೆ ಸಿಬ್ಬಂದಿಗಳ ಮೇಲೆ ಆಕ್ರೋಷದಿಂದ ಹಲ್ಲೆ ನಡೆಸುವುದರ ಮೂಲಕ ಪ್ರತಿಭಟನೆ ವ್ಯಕ್ತಪಡಿಸುತ್ತಿದ್ದಾರೆ. ಸರ್ಕಾರವು ಈ ಪ್ರದೇಶದ ರೈತರ ಅಮೂಲ್ಯ ಜೀವವನ್ನು ರಕ್ಷಿಸಲು ಯಾವುದೇ ಸಬೂಬು ನೀಡದೆ ತಕ್ಷಣ ಕ್ರಮಕೈಗೊಂಡು ಈ ವ್ಯಾಪ್ತಿಯ ಅರಣ್ಯ ಪ್ರದೇಶದ ಸುತ್ತ ರೈಲ್ವೆ ಹಳಿ ತಡೆಗೋಡೆ ನಿರ್ಮಿಸುವ ಮೂಲಕ ಇಲ್ಲಿನ ರೈತರಿಗೆ ಕಾಡಾನೆಗಳಿಂದ ಶಾಶ್ವತ ರಕ್ಷಣೆ / ಪರಿಹಾರ ಒದಗಿಸಲು ಒತ್ತಾಯಿಸುವ ಕುರಿತಂತೆ" ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ.**

*****

ಕನಕಪುರ ತಾಲ್ಲೂಕು ಕೋಡಿಹಳ್ಳಿ ವನ್ಯಜೀವಿ ವಲಯದ ವ್ಯಾಪ್ತಿಯಲ್ಲಿ ಕಾಡಾನೆ ಹಾವಳಿ ಪರಿಣಾಮಕಾರಿಯಾಗಿ ತಡೆಗಟ್ಟಲು ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ರಚಿಸಲಾಗಿರುವ ಆನೆ ಕಾರ್ಯ ಪಡೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಲಯ ಅರಣ್ಯಾಧಿಕಾರಿಗಳು, ಉಪ ವಲಯ ಅರಣ್ಯಾಧಿಕಾರಿಗಳು, ಗಸ್ತು ಅರಣ್ಯ ಪಾಲಕರು ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳು ದಿನದ 24 ಗಂಟೆಗಳ ಕಾಲ ಅರಣ್ಯ ಪ್ರದೇಶದ ಗಡಿಗಳಲ್ಲಿ ಕಾಡಾನೆಗಳು ಕಾಡಿನಿಂದ ನಾಡಿಗೆ ಬಾರದಂತೆ ಹಿಮ್ಮೆಟ್ಟಿಸಲು ಶ್ರಮಿಸುತ್ತಿದ್ದಾರೆ.

ಪ್ರತಿ ದಿನ ಬೆಳಿಗ್ಗೆ ಆನೆ ಕಾರ್ಯಪಡೆ ವತಿಯಿಂದ ಗ್ರಾಮಗಳಿಗೆ ತೆರಳಿ ಗ್ರಾಮಸ್ಥರಿಗೆ ಧ್ವನಿವರ್ಧಕ ಮೂಲಕ ಮಾಹಿತಿ ನೀಡಲಾಗುತ್ತಿದೆ. ಸಾರ್ವಜನಿಕರಿಂದ ಆನೆಗಳ ಇರುವಿಕೆ ಬಗ್ಗೆ ಆನೆ ಕಾರ್ಯಪಡೆ Control Room ಗೆ ಸ್ವೀಕೃತವಾಗುವ ದೂರುಗಳಿಗೆ ಸಂಬಂಧಿಸಿದಂತೆ ಸಿಬ್ಬಂದಿಗಳು ತೆರಳಿ ಆನೆಗಳನ್ನು ಹಿಮ್ಮೆಟ್ಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಆನೆ ಕಾರ್ಯಪಡೆ Control Room ನ ಮೂಲಕ ಕಾಡಂಚಿನ ಗ್ರಾಮಗಳ ಗ್ರಾಮಸ್ಥರ ಮೊಬೈಲ್ ದೂರವಾಣಿ ಸಂಖ್ಯೆಯನ್ನು ನೋಂದಣಿ ಮಾಡಿ ಎಸ್.ಎಂ.ಎಸ್ ಮೂಲಕ ಕಾಡಾನೆಗಳ ಚಲನವಲನಗಳ ಮಾಹಿತಿಯನ್ನು ನೀಡುವ ಮೂಲಕ ಅರಿವು ಮೂಡಿಸಲಾಗುತ್ತಿದೆ ಹಾಗೂ ಕಾಡಾನೆಗಳು ರೈತರ ಜಮೀನಿಗೆ ಬರದಂತೆ ತಡೆಯಲು ಅರಣ್ಯ ಪ್ರದೇಶದ ಗಡಿಗಳಲ್ಲಿ, 17 ಕಳ್ಳಬೇಟೆ ತಡೆ ಶಿಬಿರ ಮತ್ತು ನಾಲ್ಕು ಕ್ಷಿಪ್ರ ಪಡೆಯ ತಂಡಗಳಲ್ಲಿ ದಿನನಿತ್ಯ 24 ಗಂಟೆಗಳ ಸರದಿಯ ಆಧಾರದಲ್ಲಿ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ಕಾಡಂಚಿನಿಂದ ಕಾಡಾನೆಗಳು ನಾಡಿಗೆ ಬರದಂತೆ ನಿಯಂತ್ರಿಸಲು ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ವಿಭಾಗ ವ್ಯಾಪ್ತಿಗೆ ಬರುವ ವನ್ಯಜೀವಿ ವಲಯಗಳಲ್ಲಿ ರೈಲ್ವೆ ಹಳಿ ಬೇಲಿ ನಿರ್ಮಾಣ, ಸೋಲಾರ್ ಟೆಂಟಕಲ್ ಫೆನ್ಸಿಂಗ್, ಆನೆ ನಿರೋಧಕ ಕಂದಕ ನಿರ್ಮಾಣ ಮಾಡಿ ವನ್ಯಪ್ರಾಣಿಗಳನ್ನು ನಿಯಂತ್ರಿಸಲಾಗುತ್ತಿದೆ. ವನ್ಯಪ್ರಾಣಿಗಳು ನೀರನ್ನು ಅರಸಿ ಅರಣ್ಯ ಪ್ರದೇಶದಿಂದ ಹೊರಬರದಂತೆ ತಡೆಯಲು ಅರಣ್ಯ ಪ್ರದೇಶಗಳಲ್ಲಿ ನೀರಿನ ಮೂಲಗಳ ಪುನರುಜ್ಜೀವನಗೊಳಿಸಲು ಕೆರೆಗಳ ನಿರ್ಮಾಣ, ಕೆರೆಗಳ ಹೂಳೆತ್ತುವಿಕೆ, ನಾಲಾಬಂದ್‌ಗಳ ನಿರ್ಮಾಣ ಇತ್ಯಾದಿ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ., ದಿನದ 24 ಗಂಟೆಗಳಲ್ಲಿ ಕಳ್ಳಬೇಟೆ ಶಿಬಿರ, ಆನೆ ಹಿಮ್ಮೆಟ್ಟಿಸುವ ತಂಡ ಆರಣ್ಯ ಇಲಾಖೆ ಸಿಬ್ಬಂದಿಗಳು ಹಗಲು-ಇರುಳು ಎನ್ನದೇ ಗಸ್ತು ಮಾಡುವುದಲ್ಲದೇ, ಆನೆ ಕಾರ್ಯಪಡೆ ಸಿಬ್ಬಂದಿಗಳು ಸಹ ಕಾಡಾನೆಗಳು ಕಾಡಿನಿಂದ ಹೊರಗೆ ಬಾರದಂತೆ ಎಚ್ಚರಿಕೆ ವಹಿಸುತ್ತಿದ್ದಾರೆ.

...2..

ಕೋಡಿಹಳ್ಳಿ ವನ್ಯಜೀವಿ ವಲಯದಲ್ಲಿ ಮಾನವ ವನ್ಯಪ್ರಾಣಿ ಸಂಘರ್ಷ ತಡೆಗಟ್ಟುವ ನಿಟ್ಟಿನಲ್ಲಿ ಈಗಾಗಲೇ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.

| ಕ್ರ.ಸಂ. | ಕಾಮಗಾರಿ ವಿವರ | ಭೌತಿಕ (ಕಿ.ಮೀ.ಗಳಲ್ಲಿ) |
|---|---|---|
| 1. | ರೈಲ್ವೆ ಬ್ಯಾರಿಕೇಡ್ ನಿರ್ಮಾಣ | 11.117 |
| 2 | ಆನೆ ತಡೆ ನಿರೋಧಕ ಕಂದಕ | 23.16 |
| 3 | ಸೋಲಾರ್ ತಂತಿಬೇಲಿ | 20.25 |
| 4 | ಹ್ಯಾಂಗಿಂಗ್ ಸೋಲಾರ್ ಫೆನ್ಸ್ | 20.718 |

ಕೋಡಿಹಳ್ಳಿ ವನ್ಯಜೀವಿ ವಲಯದಲ್ಲಿ ಮಾನವ ವನ್ಯಜೀವಿ ಸಂಘರ್ಷ ಮತ್ತು ರೈತರ ಬೆಳೆ, ಆಸ್ತಿ ನಷ್ಟ, ಸಾವು-ನೋವುಗಳನ್ನು ತಡೆಗಟ್ಟುವ ದೃಷ್ಟಿಯಿಂದ ಪ್ರಸ್ತುತ ನಿಗದಿಪಡಿಸಿರುವ ಗುರಿಯನ್ವಯ 13.625 ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. ಅಲ್ಲದೇ, ಕತ್ರಿಕೆರೆ ಗೇಟ್ ನಿಂದ ವೀರಯ್ಯನದೊಡ್ಡಿ ಗೇಟ್ ವರೆಗೆ ಮತ್ತು ಪುಟ್ಟದಾಸುದೊಡ್ಡಿ ಗೇಟ್ ನಿಂದ ಕರಿಗೌಡನದೊಡ್ಡಿ ಆಲದಮರದ ವರೆಗೆ ಸೋಲಾರ್ ಟೆಂಟಕಲ್ ಬೇಲಿ ನಿರ್ಮಾಣದ ಪ್ರಸ್ತಾವನೆಯು ಪರಿಶೀಲನೆ ಹಂತದಲ್ಲಿರುತ್ತದೆ.

ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ, ಶಾಶ್ವತ ಅಂಗವಿಕಲತೆ, ಭಾಗಶಃ ಅಂಗವಿಕಲತೆ, ಮಾನವ ಗಾಯ, ಆಸ್ತಿಪಾಸ್ತಿ ನಷ್ಟ ಮತ್ತು ಬೆಳೆಹಾನಿ ಪ್ರಕರಣಗಳಲ್ಲಿ ಪರಿಹಾರ ಧನವನ್ನು ಚಾಲ್ತಿಯಲ್ಲಿರುವ ಸರ್ಕಾರಿ ಆದೇಶ ಸಂಖ್ಯೆ: ಅಪಜೀ 114 ಎಫ್.ಡಬ್ಲ್ಯೂ.ಎಲ್ 2022, ಬೆಂಗಳೂರು ದಿನಾಂಕ:15-12-2022 ರನ್ವಯ ಪಾವತಿಸಲಾಗುತ್ತಿದೆ.

---

**ಸಂಖ್ಯೆ: ಅಪಜೀ 108 ಎಫ್‌ಡಬ್ಲ್ಯೂಎಲ್ 2024**

(ಈಶ್ವರ ಬಿ.ಖಂಡ್ರೆ)

ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು